## ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಆಲೂರು .

ಸಿ.ಸಿ.ಸಂಖ್ಯೆ: /409/2022

| | | |
|---|---|---|
| ಸಾಕ್ಷಿದಾರರ ಹೆಸರು | ಶಾಂತರಾಜು | ಸಿ.ಡಬ್ಲ್ಯೂ: 2 |
| ತಂದೆಯ ಹೆಸರು | ಚನ್ನೇಗೌಡ | ಪಿ.ಡಬ್ಲ್ಯೂ: 3 |
| ವಯಸ್ಸು | 53 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಬೈರಾಪುರ | |

ದಿಃ- 21.08.2025

ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಸಅ ರವರಿಂದ,

ಚಾಸಾ 1 ಮತ್ತು 3 ರವರ ಪರಿಚಯವಿರುತ್ತದೆ. ಸಾಕ್ಷಿ ಮಹಜರ್ ನಲ್ಲಿ ತನ್ನ ಸಹಿ ನೋಡಿ ಗುರ್ತಿಸಿದ್ದು ಮಹಜರ್ ನ್ನು ನಿಪಿ-6 ಎಂದು ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಮಹಜರ್ ನ್ನು ಗುರ್ತಿಸಲಾಯಿತು. ನಿಪಿ 6 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿರುವುದಿಲ್ಲ. ಸಾಕ್ಷಿ ಭಾವಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 7 ಎಂದು ಗುರುತಿಸಲಾಯಿತು. ಪೊಲೀಸರಿಗೆ ಹೇಳಿಕೆ ನೀಡಿರುವುದಿಲ್ಲ.

(ಈ ಸಂದರ್ಭದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ ಸ.ಸ.ಅರವರಿಂದಃ

ದಿ.28.06.2022 ರಂದು ರಾತ್ರಿ 8 ಗಂಟೆ ನಾನು ಮಣಿಪುರ ಗೇಟಿನ ಬಳಿ ಹೋಗುತ್ತಿದ್ದಾಗ ಮೃತ ರಂಗಸ್ವಾಮಿ ರವರು ಕೆಎ 13 ಇಜೆ 2586 ವಾಹನದಲ್ಲಿ ಹೋಗುತ್ತಿದ್ದಾಗ ಸಕಲೇಶಪುರದಿಂದ ಕೆಎ19 ಎಂ.ಇ 0273 ವಾಹನವವು ಅತಿವೇಗ ಮತ್ತು ಅಜಾಗರೂಕತೆಯಿಂದ ಬಂದು ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿರುತ್ತದೆ ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ರಂಗಸ್ವಾಮಿಯವರ ಕೈಕಾಲುಗಳಿಗೆ ಪೆಟ್ಟಾಗಿ ಸ್ಥಳದಲ್ಲೇ ಮರಣ ಹೊಂದಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವನ್ನು ಚಾಸಾ 1 ರವರಿಗೆ ತಿಳಿಸಿರುತ್ತೇನೆ ಎಂದರೆ ಸರಿಯಲ್ಲ. ಶವವನ್ನು ಸರ್ಕಾರಿ ಆಸ್ಪತ್ರೆಗೆ ಸಾಗಿಸಿರುತ್ತೇನೆ ಎಂದರೆ ಸರಿಯಲ್ಲ. ದಿ.30.06.2022 ರಂದು ಪೊಲೀಸರು ನನ್ನನ್ನು ಅಪಘಾತವಾದ ಸ್ಥಳದಲ್ಲಿ ನಾನು ತೋರಿಸಿದ ಸ್ಥಳದಲ್ಲಿ ಚಾಸಾ 3 ಮತ್ತು 4 ರವರ ಸಮಕ್ಷಮ ಮಹಜರ್ ಮಾಡಿ ಬೆ.11 ರಿಂದ 12 ರವರೆಗೆ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ 8 ಎಂದು ಗುರುತಿಸಲಾಯಿತು. ನಿಪಿ 6 ರಿಂದ 8 ಸಂಪೂರ್ಣ ಮಾಹಿತಿ ಇದ್ದರೂ

ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.

(ಮರು ವಿಚಾರಣೆ ಇಲ್ಲ.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಶ್ರೀಮತಿ ಸ್ನೇಹಾ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಆಲೂರು .